ಕಡ್ಡಾಯ ಶಿಕ್ಷಣ ಕಾಯ್ದೆ

1348(863); ಡಾ॥ ಶಿವರಾಜ್ ಪಾಟೀಲ್ .ಎಸ್ (ರಾಯಚೂರು ನಗರ)

ಅ) ರಾಜ್ಯದಲ್ಲಿ ಕಡ್ಡಾಯ ಶಿಕ್ಷಣ (ಆರ್.ಟಿ.ಇ) ಕಾಯ್ದೆಯಡಿ ಖಾಸಗಿ ಹಾಗೂ ಅನುದಾನಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಪ್ರಸ್ತುತ ಸರ್ಕಾರದಿಂದ ದೊರೆಯುತ್ತಿರುವ ಸೌಲಭ್ಯಗಳೇನು;

ಆ) ಈ ಮಕ್ಕಳಿಗೆ ಪಠ್ಯಪುಸ್ತಕ ಹಾಗೂ ಇನ್ನಿತರೆ ಸೌಲಭ್ಯಗಳನ್ನು ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಅತ್ಯಂತ ಹಿಂದುಳಿದ ವರ್ಗದ ಕುಟುಂಬದವರ ಮಕ್ಕಳಿಗೆ ಉಚಿತ ಶಿಕ್ಷಣ ಸೌಲಭ್ಯ ನೀಡುವ ಜೊತೆಗೆ ಸರ್ಕಾರ ಪಠ್ಯಪುಸಕ್ತ, ಸಮವಸ್ತ್ರ ನೀಡಲು ಕ್ರಮ ಕೈಗೊಳ್ಳುವುದೇ;

ಇ) ರಾಯಚೂರು ಜಿಲ್ಲೆಯಲ್ಲಿನ ಖಾಸಗಿ ಶಾಲೆಗಳಲ್ಲಿ ಈ ಯೋಜನೆಯಡಿ ವ್ಯಾಸಂಗ ಮಾಡುತ್ತಿರುವ ಮಕ್ಕಳ ಪೋಷಕರಿಂದ ಪಠ್ಯ ಪುಸ್ತಕ ಹಾಗೂ ಸಮವಸ್ತ್ರಗಳಿಗಾಗಿ ಶುಲ್ಕ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಈ ಕ್ರಮ ದಂಧೆಯನ್ನು ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ರಾಯಚೂರು ಜಿಲ್ಲೆಯ ವಿಧಾನಸಭಾವಾರು ವಿವರ ನೀಡುವುದು)?

ಶ್ರೀ ಕಿಮ್ಮನೆ ರತ್ನಾಕರ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಶಿಕ್ಷಣ ಹಕ್ಕು ಕಾಯಿದೆ ಯೋಜನೆಯಡಿಯಲ್ಲಿ ದಾಖಲಾದ ಮಕ್ಕಳ ಶುಲ್ಕ ಮರುಪಾವತಿಯನ್ನು (ಸರ್ಕಾರದ ಮಕ್ಕಳಿಗೆ ನೀಡುವ ಸೌಲಭ್ಯಗಳ ಖರ್ಚುಗಳ ಆಧಾರದ ಮೇರೆಗೆ ನಿಗಧಿಪಡಿಸಿದ ದರ) ಖಾಸಗಿ ಅನುದಾನ ರಹಿತ (ಅಲ್ಪಸಂಖ್ಯಾತವಲ್ಲದ) ಶಿಕ್ಷಣ ಸಂಸ್ಥೆಗಳಿಗೆ ನೀಡಲಾಗುವುದು. ಅನುದಾನಿತ ಶಿಕ್ಷಣ ಸಂಸ್ಥೆಯಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಪಠ್ಯ ಪುಸ್ತಕಗಳನ್ನು ನೀಡಲಾಗುವುದು.

ಆ) ಅನುದಾನಿತ ಶಿಕ್ಷಣ ಸಂಸ್ಥೆಯಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಪಠ್ಯಪುಸ್ತಕಗಳನ್ನು ನೀಡಲಾಗುವುದು.

ಶಿಕ್ಷಣ ಹಕ್ಕು ಕಾಯಿದೆ ಯೋಜನೆಯಡಿಯಲ್ಲಿ ದಾಖಲಾದ ಮಕ್ಕಳಿಗೆ ಪ್ರತ್ಯೇಕವಾಗಿ ಪಠ್ಯಪುಸ್ತಕ ಮತ್ತು ಸಮವಸ್ತ್ರ ನೀಡುವ ಪ್ರಸ್ತಾವನೆ ಪ್ರಸ್ತುತ ಇರುವುದಿಲ್ಲ.

ಇ) ಬಂದಿರುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಅಂಗನವಾಡಿ ಕೇಂದ್ರಗಳ ಮಂಜೂರಾತಿ

1350(786); ಡಾ॥ ಉಮೇಶ ಜಿ. ಜಾಧವ್

ಅ) ಚಿಂಚೋಳಿ ವಿಧಾನ ಸಭಾ ಕ್ಷೇತ್ರದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಜನರು ಹೆಚ್ಚಿನ ಜನಸಂಖ್ಯೆಯಲ್ಲಿದ್ದು, ಇವರು ವಾಸಿಸುವ ತಾಂಡಾ, ಹಾಡಿ ಹಾಗೂ ಕಾಲೋನಿಗಳಲ್ಲಿ ಅಂಗನವಾಡಿ ಕೇಂದ್ರಗಳಿಲ್ಲದಿರುವುದರಿಂದ 6 ತಿಂಗಳಿಂದ 4 ವರ್ಷದ ಮಕ್ಕಳಿಗೆ, ಗರ್ಭಿಣಿ–ಬಾಣಂತಿ ಮತ್ತು ಕಿಶೋರಿಯರಿಗೆ ತೀರಾ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮವೇನು;

ಇ) ಪ್ರಸಕ್ತ ಸಾಲಿನಲ್ಲಿ ಚಿಂಚೋಳಿ ವಿಧಾನಸಭಾ ಕ್ಷೇತ್ರಕ್ಕೆ ಹೊಸದಾಗಿ ಅಂಗನವಾಡಿ ಕೇಂದ್ರಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಈ) ಹಾಗಿದ್ದಲ್ಲಿ, ಎಷ್ಟು ಕಾಲಿಮಿತಿಯೊಳಗೆ ಮಂಜೂರು ಮಾಡಲಾಗುವುದು; (ವಿವರ ನೀಡುವುದು);